# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನೇರ ನೇಮಕಾತಿ ರಿಕ್ತ ಸ್ಥಾನಗಳನ್ನು ಬಡ್ತಿ ರಿಕ್ತ ಸ್ಥಾನಗಳನ್ನಾಗಿ ಪರಿವರ್ತಿಸುವ ಕುರಿತು.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 32 ಸೇವಿಇ 96 ದಿನಾಂಕ 03.05.1996
2. ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿಯ 32ನೆಯ ವರದಿ.

ಪ್ರಸ್ತಾವನೆ:

ರಾಜ್ಯ ಸಿವಿಲ್ ಸೇವೆಯಲ್ಲಿನ ಯಾವುದೇ ವೃಂದಕ್ಕೆ ನೇಮಕಾತಿಯನ್ನು ನೇಮಕಾತಿ ನಿಯಮದಲ್ಲಿ ನಿಗದಿಪಡಿಸಿದಂತಹ ವಿಧಾನವನ್ನು ಅನುಸರಿಸಿ ಮಾಡಬೇಕಾಗುತ್ತದೆ. ನೇರ ನೇಮಕಾತಿಯಿಂದ ತುಂಬಬೇಕಾದಂತಹ ಹುದ್ದೆಗಳನ್ನು ಆ ವಿಧಾನದಿಂದಲೇ ತುಂಬಬೇಕಾಗುತ್ತದೆ. ನೇರ ನೇಮಕಾತಿ ಖಾಲಿ ಹುದ್ದೆಗಳನ್ನು ಬಡ್ತಿ ಹುದ್ದೆಗಳನ್ನಾಗಿ ಪರಿವರ್ತಿಸಿ, ಅವುಗಳನ್ನು ಬಡ್ತಿಯಿಂದ ತುಂಬುವುದು ನೇಮಕಾತಿ ನಿಯಮದ ಉದ್ದೇಶವನ್ನು ವಿಫಲಗೊಳಿಸಿದಂತಾಗುತ್ತದೆ. ಸಿವಿಲ್ ಸೇವೆಯಲ್ಲಿನ ಕಲವು ವೃಂದಗಳಿಗೆ ಅನುಭವಿ ನೌಕರರ ಜೊತೆಗೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿರುವ ನವ ಯುವಕರನ್ನು ಪಡೆಯುವ ಉದ್ದೇಶದಿಂದ ಬಡ್ತಿ ಮತ್ತು ನೇರ ನೇಮಕಾತಿ ಕೋಟಾವನ್ನು ನಿಗದಿಪಡಿಸಲಾಗಿರುತ್ತದೆ. ಈ ಕೋಟಾದನ್ವಯ ನೇಮಕಾತಿಯನ್ನು ಮಾಡದೇ ಇದ್ದಲ್ಲಿ, ಅದು ಸಿವಿಲ್ ಸೇವೆಯ ಮೇಲೆ ಪ್ರತಿಕೂಲ ಪರಿಣಾಮವನ್ನು ಬೀರುತ್ತದೆ. ಆದರೆ, ಹಿಂದೆ ಅನೇಕ ಕಾರಣಗಳಿಂದಾಗಿ ದೀರ್ಘ ಕಾಲದವರೆಗೆ ಕಲವು ವೃಂದಗಳಿಗೆ ನೇರ ನೇಮಕಾತಿ ನಡೆದಿರಲಿಲ್ಲ. ಆ ಹುದ್ದೆಗಳ ಕಾರ್ಯವನ್ನು ನಿರ್ವಹಿಸಲು ಅನುವಾಗುವಂತೆ ಪೋಷಕ ವೃಂದದಲ್ಲಿರುವ ನೌಕರರನ್ನು ಹಿಂಬಡ್ತಿಗೊಳಿಸುವುದು ಸೂಕ್ತವಲ್ಲವೆಂದು ಭಾವಿಸಿ, ನೇರ ನೇಮಕಾತಿ ಹುದ್ದೆಗಳನ್ನು ಕಾಲಕಾಲಕ್ಕೆ ತುಂಬದಿರುವುದರಿಂದ ಉಂಟಾದ ಸಮಸ್ಯೆಗಳನ್ನು ಪರಿಶೀಲಿಸಿ ಸೂಕ್ತ ಶಿಫಾರಸ್ಸು ಮಾಡಲು ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉಲ್ಲೇಖ (1)ರಲ್ಲಿ ನಮೂದಿಸಿರುವ ಆದೇಶದ ಮೂಲಕ ಒಂದು ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿಯು ಗುರುತಿಸಿದ ಕಲವು ಇಲಾಖೆಗಳಲ್ಲಿ ಒಂದು ಬಾರಿಯ ಕ್ರಮವಾಗಿ ನೇರ ನೇಮಕಾತಿ ಖಾಲಿ ಹುದ್ದೆಗಳನ್ನು ಬಡ್ತಿ ಹುದ್ದೆಗಳನ್ನಾಗಿ ಪರಿವರ್ತಿಸಲು ಶಿಫಾರಸ್ಸು ಮಾಡಿತ್ತು, ಅದರಂತೆ ಕ್ರಮ ಕೈಗೊಳ್ಳಲಾಗಿದೆ.

2. ದಿನಾಂಕ 25.05.2006 ರಂದು ನಡೆದ ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿಯು ಸರ್ಕಾರದ ಬಹಳಷ್ಟು ಇಲಾಖೆಗಳಲ್ಲಿ ನೇರ ನೇಮಕಾತಿ ಖಾಲಿ ಹುದ್ದೆಗಳನ್ನು

ರಿಕ್ತ ಖಾಲಿ ಹುದ್ದೆಗಳನ್ನಾಗಿ ಪರಿವರ್ತಿಸಿದ ಅಧಿಸೂಚನೆಗಳನ್ನು ಪರಿಶೀಲಿಸಿ, ಈ ರೀತಿ ಪರಿವರ್ತಿಸಿದ ಕ್ರಮವು ಸರಿಯಲ್ಲವೆಂದು ಅಭಿಪ್ರಾಯ ಪಡುತ್ತಾ ಸಮಿತಿಯು ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿನ ಸಮಿತಿಯನ್ನು ರದ್ದುಪಡಿಸಲು ಶಿಫಾರಸ್ಸು ಮಾಡಿದ್ದು, ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿಯ 32ನೆಯ ವರದಿಯಲ್ಲಿ ಈ ಶಿಫಾರಸ್ಸು ಸೇರಿದೆ. ಈ ಶಿಫಾರಸ್ಸು ಹಾಗೂ ರಾಜ್ಯ ಸಿವಿಲ್ ಸೇವೆಯಲ್ಲಿನ ಕೆಲವು ವೃಂದಗಳಿಗೆ ಅನುಭವಿ ನೌಕರರ ಜೊತೆಗೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿರುವ ನವ ಯುವಕರನ್ನು ಪಡೆಯುವ ಉದ್ದೇಶದಿಂದ ಇನ್ನು ಮುಂದೆ ನೇರ ನೇಮಕಾತಿ ಖಾಲಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ತುಂಬಲು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳುವಂತೆ ನಿರ್ದೇಶಿಸಲು ಉದ್ದೇಶಿಸಲಾಗಿದೆ. ಅದರಂತೆ ಈ ಆದೇಶ.

<u>ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 23 ಸೇನಿಇ 2006, ಬೆಂಗಳೂರು, ದಿನಾಂಕ 06.09.2007.</u>

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ನೇರ ನೇಮಕಾತಿ ರಿಕ್ತ ಸ್ಥಾನಗಳನ್ನು ಬಡ್ತಿ ರಿಕ್ತ ಸ್ಥಾನಗಳನ್ನಾಗಿ ಪರಿವರ್ತಿಸುವ ಕುರಿತು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 32 ಸೇನಿಇ 96 ದಿನಾಂಕ 03.05.1996ರಲ್ಲಿ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ ಮತ್ತು ಇನ್ನು ಮುಂದೆ ನೇರ ನೇಮಕಾತಿ ಖಾಲಿ ಹುದ್ದೆಗಳನ್ನು ಕಡ್ಡಾಯವಾಗಿ ನೇರ ನೇಮಕಾತಿಯಿಂದಲೇ ತುಂಬಲು ಕ್ರಮ ತೆಗೆದುಕೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ. ನಾಗೇಶ್ ಪಾಟೀಲ್) 6.9.07
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಸೇವಾ ನಿಯಮಗಳು-1).

6/9

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ.

ಗೆ,

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ) (ಸಿ.ಸಂ: 365/07).